**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 182 ಸೇನೆನಿ 2011 ಸಿಆಸುಇ(ಸೇವಾ ನಿಯಮಗಳು-ಎ)
ವಿಧಾನ ಸೌಧ,
ಬೆಂಗಳೂರು, ದಿನಾಂಕ:23.03.2017

**ಅಧಿಕೃತ ಜ್ಞಾಪನ**

ವಿಷಯ: ಮಾನ್ಯ ಸರ್ವೋಚ್ಛ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ: 2368/2011- ಬಿ.ಕೆ. ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಪ್ರಕರಣದಲ್ಲಿ ದಿನಾಂಕ: 09.02.2017ರಂದು ನೀಡಿರುವ ತೀರ್ಪಿನನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ವಿವಿಧ ವೃಂದಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಸೆಹಿಮ 1977 ದಿನಾಂಕ. 27.04.1978.

2. The Karnataka Determination of Seniority of the Government Servants Promoted on the Basis of Reservation (to the Posts in the Civil Services of the State) Act, 2002.

3. ಸಿವಿಲ್ ಅಪೀಲು ಸಂಖ್ಯೆ: 2368/2011ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 09.02.2017ರಂದು ನೀಡಿರುವ ತೀರ್ಪು.

*~*~*~*~*

ಉಲ್ಲೇಖ (1)ರ ದಿನಾಂಕ: 27.04.1978ರ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ವೃಂದದ ಹುದ್ದೆಗಳಿಗೆ (ಗ್ರೂಪ್-ಎ ಕಿರಿಯ ಶ್ರೇಣಿಯವರೆಗೆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಧಿಕಾರಿ/ ನೌಕರರಿಗೆ ಮುಂಬಡ್ತಿಯಲ್ಲಿ ಮೀಸಲಾತಿಯನ್ನು ನೀಡಲಾಗುತ್ತಿದೆ.

ಉಲ್ಲೇಖ (2)ರ 2002ರ ಅಧಿನಿಯಮದ ಸೆಕ್ಷನ್ 4ರನ್ವಯ ಮುಂಬಡ್ತಿ ಹೊಂದಿದ ವೃಂದದಲ್ಲಿ ಜೇಷ್ಠತೆಯನ್ನು ನಿಗದಿಪಡಿಸಲಾಗುತ್ತಿದೆ.

ಉಲ್ಲೇಖ (3)ರ ಸಿವಿಲ್ ಅಪೀಲು ಸಂಖ್ಯೆ: 2368/2011 - ಬಿ.ಕೆ. ಪವಿತ್ರ ಮತ್ತಿತರರು ವಿರುದ್ಧ ಕೇಂದ್ರ ಸರ್ಕಾರ ಮತ್ತಿತರರು ಪ್ರಕರಣದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 9.02.2017ರ ತೀರ್ಪಿನಲ್ಲಿ ಈ ಕೆಳಗಿನಂತೆ ನಿರ್ದೇಶನ ನೀಡಿರುತ್ತದೆ.

*"In view of the above, we allow these appeals, set aside the impugned judgment and declare the provisions of the impugned Act to the extent of doing away with the 'catch up' rule and*

*providing for consequential seniority under Sections 3 and 4 to persons belonging to SCs and STs on promotion against roster points to be ultra vires Articles 14 and 16 of the Constitution. The judgment will not affect those who have already retired and will not affect financial benefits already taken. Consequential promotions granted to serving employees, based on consequential seniority benefit, will be treated as ad hoc and liable to be reviewed. Seniority list may be now revised in the light of this judgment within three months from today. Further consequential action may be taken accordingly within next three months"*

ಈ ಹಿನ್ನೆಲೆಯಲ್ಲಿ, ಸರ್ಕಾರದ ಪ್ರಮುಖ ಇಲಾಖೆಗಳಾದ ಲೋಕೋಪಯೋಗಿ ಇಲಾಖೆ ಮತ್ತು ಇಂಧನ ಇಲಾಖೆಗಳ ಜೇಷ್ಠತಾ ಪಟ್ಟಿಗಳ ಅಧ್ಯಯನ ನಡೆಸಿ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸುವ ಸಲುವಾಗಿ ಸೂಕ್ತ ಮಾರ್ಗಸೂಚಿಗಳನ್ನು ಎರಡು ವಾರಗಳೊಳಗಾಗಿ ರಚಿಸಲು ಸರ್ಕಾರದ ವಿಶೇಷ ಕಾರ್ಯದರ್ಶಿ, ಸಿಆಸುಇ (ಸೇವಾ ನಿಯಮಗಳು)ಇವರಿಗೆ ವಹಿಸಲಾಗಿದೆ. ಈ ಕಾರ್ಯವನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರ ಸಚಿವಾಲಯದ ಲೋಕೋಪಯೋಗಿ ಇಲಾಖೆ, ಇಂಧನ ಇಲಾಖೆ ಮತ್ತು ಆರ್ಥಿಕ ಇಲಾಖೆಯ ಸೇವೆಗಳು ವಿಭಾಗದ ಉಪ ಕಾರ್ಯದರ್ಶಿಗಳು ಮತ್ತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸೇವಾ ನಿಯಮಗಳು ವಿಭಾಗದ ಉಪ ಕಾರ್ಯದರ್ಶಿ, ವಿಶೇಷ ಕಾರ್ಯದರ್ಶಿಗಳು ಸಿಆಸುಇ(ಸೇವಾ ನಿಯಮಗಳು)ಇವರಿಗೆ ಸೂಕ್ತ ನೆರವು ನೀಡುವುದು.

Gayathri.M.R
23.03.17

(ಗಾಯತ್ರಿ.ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿ.ಆ.ಸು.ಇಲಾಖೆ (ಸೇವಾ ನಿಯಮಗಳು-1).

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರು
4. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
5. ಸಂಬಂಧಪಟ್ಟ ಅಧಿಕಾರಿಗಳಿಗೆ
6. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.